ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)
ಅಧ್ಯಕ್ಷರು, ಆಯ್ಕೆ ಪ್ರಾಧಿಕಾರ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ. ಮೈಸೂರು.
ದೂರವಾಣಿ ಸಂಖ್ಯೆ:0821-2424079,2422110,2428383
ಫ್ಯಾಕ್ಸ್ ನಂ : 2429012 & 2428383 E-Mail deo.mysore@gmail.com

ಸಂಖ್ಯೆ : MYSDC-EST2/VA(15)/2/2017 E- 1998 ದಿನಾಂಕ: 22/11/2017

## ಅಧಿಕೃತ ಜ್ಞಾಪನ

ವಿಷಯ: 2016-17 ನೇ ಸಾಲಿನಲ್ಲಿ ಮೈಸೂರು ಜಿಲ್ಲಾ ಕಂದಾಯ ಘಟಕದ ಗ್ರಾಮಲೆಕ್ಕಿಗರ ನೇಮಕಾತಿ ಸಂಬಂಧ ಮೂಲ ದಾಖಲಾತಿಗಳನ್ನು ಪರಿಶೀಲಿಸಿದ್ದು, ಪಟ್ಟಿ ಪ್ರಕಟಿಸುವ ಕುರಿತು.

ಉಲ್ಲೇಖ:1) ಈ ಕಛೇರಿಯ ಅಧಿಸೂಚನೆ ಸಂಖ್ಯೆ ವಿಎ ಇ.ಎಸ್.ಟಿ 84/2016-17 ದಿನಾಂಕ: 06/12/2016

2) ಈ ಕಛೇರಿಯ ಅಧಿಕೃತ ಜ್ಞಾಪನ ಸಮ ಸಂಖ್ಯೆ ದಿನಾಂಕ: 22/08/2017

****

ಮೈಸೂರು ಜಿಲ್ಲಾ ಕಂದಾಯ ಘಟಕದ ವಿವಿಧ ತಾಲ್ಲೂಕುಗಳಲ್ಲಿ ಗ್ರೂಪ್ ಸಿ ವೃಂದದ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು, ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಉಲ್ಲೇಖ (1) ರಂತೆ ಆಹ್ವಾನಿಸಲಾಗಿತ್ತು.

ಉಲ್ಲೇಖ (2) ರ ಅಧಿಕೃತ ಜ್ಞಾಪನದಲ್ಲಿ ಒಟ್ಟು 105 ಹುದ್ದೆಗಳಿಗೆ ಅನುಗುಣವಾಗಿ 1 : 5 ಅನುಪಾತದಲ್ಲಿ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ವಯ ಅಭ್ಯರ್ಥಿಗಳ ಮೂಲ ದಾಖಲಾತಿಗಳನ್ನು ಪರಿಶೀಲಿಸಲು ದಿನಾಂಕ ನಿಗಧಿಪಡಿಸಿ ಪರಿಶೀಲನಾ ಕಾರ್ಯ ಪೂರ್ಣಗೊಂಡಿರುತ್ತದೆ.

ಅದರಂತೆ ಈ ಕೆಳಕಂಡಂತೆ ಅನುಬಂಧಗಳಲ್ಲಿ ಪ್ರಕಟಿಸಲಾಗಿದೆ.

1) ಮೂಲ ದಾಖಲಾತಿಗಳನ್ನು ಪರಿಶೀಲಿಸಲು ನಿಗಧಿತ ದಿನಾಂಕದಂದು ಹಾಜರಾಗದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಿ ಅನುಬಂಧ- 1 ಎ ರಲ್ಲಿ ಪ್ರಕಟಿಸಲಾಗಿದೆ.
2) ಮೂಲ ದಾಖಲಾತಿಗಳನ್ನು ಪರಿಶೀಲಿಸಲು ನಿಗಧಿತ ದಿನಾಂಕದಂದು ಹಾಜರಾಗಿ ಅಗತ್ಯವಿರುವ ದಾಖಲಾತಿಗಳನ್ನು ಹಾಜರುಪಡಿಸದ ಕಾರಣ ಸಂಬಂಧಪಟ್ಟ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಿ ಅನುಬಂಧ- 1 ಬಿ ರಲ್ಲಿ ಪ್ರಕಟಿಸಲಾಗಿದೆ.
3) ಮೂಲ ದಾಖಲಾತಿಗಳನ್ನು ಪರಿಶೀಲಿಸಲು ನಿಗಧಿತ ದಿನಾಂಕದಂದು ಹಾಜರಾಗಿ ನಿಗಧಿತ ದಾಖಲಾತಿಗಳನ್ನು ಹಾಜರುಪಡಿಸದ ಕಾರಣ ಅಂತಹ ದಾಖಲಾತಿಗಳ ರೋಸ್ಟರ್ ಹಾಗೂ ಸಮತಳ ಮೀಸಲಾತಿಯನ್ನು ರದ್ದುಪಡಿಸಿ ಅನುಬಂಧ-2 ರಲ್ಲಿ ಪ್ರಕಟಿಸಲಾಗಿದೆ.

4) ಮೂಲ ದಾಖಲಾತಿಗಳನ್ನು ಪರಿಶೀಲಿಸಲು ನಿಗಧಿತ ದಿನಾಂಕದಂದು ಹಾಜರಾಗಿ ಅಗತ್ಯವಿರುವ ದಾಖಲಾತಿಗಳನ್ನು ಹಾಜರುಪಡಿಸಿರುವ ಅಭ್ಯರ್ಥಿಗಳ ಅರ್ಜಿಗಳನ್ನು ಮುಂದಿನ ಪ್ರಕ್ರಿಯೆಗೆ ಪರಿಗಣಿಸಿ ಅನುಬಂಧ-3 ರಲ್ಲಿ ಪ್ರಕಟಿಸಲಾಗಿದೆ.

ಅಧ್ಯಕ್ಷರು,
ಆಯ್ಕೆ ಪ್ರಾಧಿಕಾರ ಹಾಗೂ ನೇಮಕಾತಿ ಪ್ರಾಧಿಕಾರ,
ಮತ್ತು ಜಿಲ್ಲಾಧಿಕಾರಿ
ಮೈಸೂರು ಜಿಲ್ಲೆ, ಮೈಸೂರು.

ಆಯ್ಕೆ ಪ್ರಾಧಿಕಾರ ಹಾಗೂ ನೇಮಕಾತಿ ಪ್ರಾಧಿಕಾರ
ಮತ್ತ್ ಜಿಲ್ಲಾಧಿಕಾರಿ
ಮೈಸೂರು ಜಿಲ್ಲೆ, ಮೈಸೂರು.

ಪ್ರತಿಯನ್ನು: ಈ ಕೆಳಕಂಡವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ/ಕಳುಹಿಸಿದೆ.

1) ರಾಷ್ಟ್ರೀಯ ಸೂಚನಾ ವಿಜ್ಞಾನಾಧಿಕಾರಿಗಳು, ರಾಷ್ಟ್ರೀಯ ಸೂಚನಾ ವಿಜ್ಞಾನ ಕೇಂದ್ರ, ಜಿಲ್ಲಾ ಪಂಚಾಯತ್, ಮೈಸೂರು ಇವರಿಗೆ ಸದರಿ ಅಧಿಕೃತ ಜ್ಞಾಪನ ಹಾಗೂ ಪಟ್ಟಿಯನ್ನು ವೆಬ್ ಸೈಟ್ ನಲ್ಲಿ ಪ್ರಕಟಿಸಲು ಕೋರಿದೆ.
2) ಜಿಲ್ಲೆಯ ಎಲ್ಲಾ ಉಪವಿಭಾಗಾಧಿಕಾರಿಗಳು/ತಹಸೀಲ್ದಾರರುಗಳಿಗೆ ಕಳುಹಿಸುತ್ತಾ ಅಧಿಸೂಚನೆಯನ್ನು ಪ್ರಕಟಣಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
3) ಈ ಕಛೇರಿಯ ಪ್ರಕಟಣಾ ಫಲಕದಲ್ಲಿ ಪ್ರಕಟಿಸಲು.
4) ಕಛೇರಿ ಪ್ರತಿ.